**ಕರ್ನಾಟಕ ಸರ್ಕಾರ**

ಸಂ:ಡಿ.ವೈ.ಇ.ಎಸ್/ಕ್ರೀಚಕಪ್ರೋ/69/2025-26

ಆಯುಕ್ತರ ಕಾರ್ಯಾಲಯ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 17-07-2026

**ಸುತ್ತೋಲೆ**

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳಡಿ 2025-26 ನೇ ಸಾಲಿನ ವಿದ್ಯಾರ್ಥಿ ವೇತನ ಯೋಜನೆ ಅಡಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 206-27ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅದೀಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು 2025-26 ನೇ ಸಾಲಿನ ವಿದ್ಯಾರ್ಥಿ ವೇತನ ಯೋಜನೆ ಅಡಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಅಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ: **https://sevasindu.karnataka.gov.in** ಮೂಲಕ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಅಂತಿಮ **ದಿನಾಂಕ:31.07.2026 ರಂದು ಕೊನೆಯ ದಿನಾಂಕವಾಗಿರುತ್ತದೆ,** ಈ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚು ಪ್ರಚಾರದಲ್ಲಿರುವ ಸ್ಥಳೀಯ ದಿನ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಪತ್ರಿಕಾ ವರದಿ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಯುವ ಸಹಾಯವಾಣಿ 155265 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಸೂಚಿಸಿದೆ.**

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಕಂಠೀರವ ಕ್ರೀಡಾಂಗಣ.
2. ಮಹಾನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಸಂಸ್ಥೆ, ಬೆಂಗಳೂರು.
5. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
6. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
7. ಹೆಚ್ಚುವರಿ ಪ್ರತಿ.

## ಕ್ರೀಡಾ ವಿದ್ಯಾರ್ಥಿ ವೇತನಕ್ಕೆ ಮಾರ್ಗಸೂಚಿಗಳು

1. ಅರ್ಜಿದಾರರು ಅರ್ಜಿ ಸಲ್ಲಿಸುವ ವರ್ಷದಲ್ಲಿ (06 ರಿಂದ 10ನೇ ತರಗತಿ) ಮಾಧ್ಯಮಿಕ ಅಥವಾ ಪ್ರೌಢಶಾಲೆಯಲ್ಲಿ ಒದುತ್ತಿರುವ ವಿದ್ಯಾರ್ಥಿ ಯಾಗಿರಬೇಕು.
2. ಅರ್ಜಿದಾರರು ಶೈಕ್ಷಣಿಕ ಇಲಾಖೆ ಸಾಧನೆಯನ್ನು ರಾಜ್ಯ ಕ್ರೀಡಾ ಪ್ರಾಧಿಕಾರದಲ್ಲಿ ನೊಂದಾಯಿತವಾದ ಕ್ರೀಡಾ ಸಂಸ್ಥೆಗಳು ನಡೆಸಿದ ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದಿರಬೇಕು ಅಥವಾ ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿರಬೇಕು.ಅಂದರೆ ಅರ್ಜಿ ಆಹ್ವಾನಿಸುವ ಹಿಂದಿನ ವರ್ಷದ ಶೈಕ್ಷಣಿಕ ವರ್ಷ ಅಂದರೆ 01ನೇ ಏಪ್ರಿಲ್ ಮಾಹೆಯಿಂದ 31ನೇ ಮಾರ್ಚ್ ಅವಧಿಯಲ್ಲಿ ನಡೆದ ಕ್ರೀಡಾಕೂಟಗಳಲ್ಲಿ ಸಾಧನೆಯನ್ನು ಮಾತ್ರ ಪರಿಗಣಿಸತಕ್ಕದ್ದು.
3. ರಾಷ್ಟ್ರೀಯ ಖೇಲೋ ಇಂಡಿಯಾ ಕ್ರೀಡಾಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ್ದಲ್ಲಿ ಅಂತಹ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದಾಗಿದೆ.
4. ರಾಷ್ಟ್ರೀಯ ಶಾಲಾ ಕ್ರೀಡಾಕೂಟದಲ್ಲಿ ರಾಜ್ಯ ತಂಡವನ್ನು ಪ್ರತಿನಿಧಿಸಿ ಭಾಗವಹಿಸಿದ್ದಲ್ಲಿ ಅಂತಹ ಕ್ರೀಡಾಪಟುಗಳು ಅರ್ಜಿ ಸಲ್ಲಿಸಬಹುದಾಗಿದೆ.
5. ಒಬ್ಬ ಕ್ರೀಡಾಪಟು ಒಂದಕ್ಕಿಂತ ಹೆಚ್ಚು ಕ್ರೀಡೆಗಳಲ್ಲಿ ಭಾಗವಹಿಸಿದ್ದರೂ ಸಹ ವಾರ್ಷಿಕ ಒಂದು ವಿದ್ಯಾರ್ಥಿ ವೇತನದ ಮೊತ್ತಕ್ಕೆ ಮಾತ್ರ ಅರ್ಹರಿರುತ್ತಾರೆ.
6. ವಿದ್ಯಾರ್ಥಿ ವೇತನದ ಮೊತ್ತವನ್ನು ವಾರ್ಷಿಕ ರೂ.10,000/- ಗಳನ್ನು ಮಾತ್ರ ಮಂಜೂರು ಮಾಡತಕ್ಕದ್ದು.
7. ಅರ್ಜಿಗಳನ್ನು Seve Sindhu Online Portal online ಮೂಲಕ ಸಲ್ಲಿಸುವುದು.
8. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಯುವ ಸಹಾಯವಾಣಿ 155265 ಗೆ ಸಂಪರ್ಕಿಸಬಹುದಾಗಿದ್ದೆ.

ಆಯುಕ್ತರು

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ